ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪೌರತ್ವ ಮಸೂದೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE 19/12/2019

ಸಂ.ಕ. 19/12/19

# ಪೌರ ಶಾಸನ ತಡೆಗೆ ಸುಪ್ರೀಂ ನಕಾರ

ನವದೆಹಲಿ: ಪೌರತ್ವ ಕಾಯ್ದೆ ತಿದ್ದುಪಡಿ ಜಾರಿಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಈ ಸಂಬಂಧ ಸಲ್ಲಿಸಲಾಗಿರುವ 60 ಅರ್ಜಿಗಳ ವಿಚಾರಣೆಯನ್ನು ಜನವರಿ 22ರಂದು ಆರಂಭಿಸುವುದಾಗಿ ಮುಖ್ಯ ನ್ಯಾಯಮೂರ್ತಿ ನೇತೃತ್ವದ ಪೀಠ ಪ್ರಕಟಿಸಿದೆ. ಏತನ್ಮಧ್ಯೆ ಹಿಂಸಾಚಾರ ಘಟನಾವಳಿಗಳ ಕುರಿತು ದೆಹಲಿ ಹೈಕೋರ್ಟ್ ಗುರುವಾರ ವಿಚಾರಣೆ ಕೈಗೆತ್ತಿಕೊಳ್ಳಲಿದೆ.

ದೇಶದೆಲ್ಲೆಡೆ ಭಾರೀ ಜನಾಕ್ರೋಶಕ್ಕೆ ಕಾರಣವಾಗಿರುವ ವಿವಾದಾತ್ಮಕ ಪೌರತ್ವ ತಿದ್ದುಪಡಿ ಕಾಯ್ದೆಯ ಜಾರಿ ತಡೆಹಿಡಿಯಬೇಕೆಂಬ ಕೋರಿಕೆಯನ್ನು ಸಿಜೆಐ ಎಸ್‌ಎ ಬೋಬ್ಡೆ ನೇತೃತ್ವದ ತ್ರಿಸದಸ್ಯ ಪೀಠ ತಳ್ಳಿಹಾಕಿದೆ. ಕಾಯ್ದೆಯ ಸಂವಿಧಾನಬದ್ಧತೆ ಪ್ರಶ್ನಿಸಿ ಮುಸ್ಲಿಂ ಲೀಗ್ ಮತ್ತು ಅಸ್ಸಾಂ ಗಣ ಪರಿಷತ್ ಸೇರಿದಂತೆ ವಿವಿಧ ಸಂಸ್ಥೆಗಳು ಹಾಗೂ ವ್ಯಕ್ತಿಗಳು ಸಲ್ಲಿಸಿರುವ ಅರ್ಜಿಗಳ ಸಂಬಂಧ ಕೇಂದ್ರ ಸರ್ಕಾರಕ್ಕೆ ನೋಟಿಸ್ ನೀಡಲಾಗಿದೆ. ಕಾಯ್ದೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಗೊಂದಲ ನಿವಾರಿಸಲು ಸರ್ಕಾರಕ್ಕೆ ಸೂಚಿಸಲಾಗಿದೆ.

ಜಾಮಿಯಾ ಮಿಲಿಯಾ ಮತ್ತು ಅಲಿಘಡ ವಿಶ್ವವಿದ್ಯಾಲಯ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯ ಘಟನೆ ತನಿಖೆಗೆ ಸತ್ಯಶೋಧನಾ ಸಮಿತಿ ರಚಿಸುವ ಬಗ್ಗೆ ದೆಹಲಿ ಹೈಕೋರ್ಟ್ ಮುಖ್ಯನ್ಯಾಯಮೂರ್ತಿ ಡಿಎನ್ ಪಟೇಲ್ ನೇತೃತ್ವದ ಪೀಠ ವಿಚಾರಣೆ ನಡೆಸಲಿದೆ.

ದೆಹಲಿಯ ಸೀಲಾಂಪುರ ಪ್ರದೇಶದಲ್ಲಿ ಸತತ 3ನೇ ದಿನವೂ ಪ್ರತಿಭಟನೆ ಮುಂದುವರಿದಿದ್ದು ಹಿಂಸಾಚಾರ ಪ್ರಕರಣಗಳಿಗೆ ಸಂಬಂಧಿಸಿದಂತೆ ಅನೇಕರನ್ನು ಬಂಧಿಸಲಾಗಿದೆ. ಜಾಮಿಯಾ ಮಿಲಿಯಾ ವಿಶ್ವವಿದ್ಯಾಲಯದ ಶಿಕ್ಷಕರು ಶಾಂತಿ ಯಾತ್ರೆ ನಡೆಸಿ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯ ಖಂಡಿಸಿದ ಎಲ್ಲರಿಗೂ ಕೃತಜ್ಞತೆ ಸಮರ್ಪಿಸಿದರು. ಗುವಾಹಟಿ, ಚೆನ್ನೈ, ಕೊಲ್ಕತ್ತಾ, ಸೊಲ್ಲಾಪುರ ಮುಂತಾದೆಡೆ ಬೃಹತ್ ಪ್ರತಿಭಟನಾ ರ್ಯಾಲಿಗಳನ್ನು ನಡೆಸಲಾಗಿದೆ.

## ಶಾಹಿ ಇಮಾಂ ಅಭಿಮತ

ಪೌರತ್ವ ಕಾಯ್ದೆ ತಿದ್ದುಪಡಿಯಿಂದ ಭಾರತದ ಮುಸ್ಲಿಮರಿಗೆ ಯಾವುದೇ ತೊಂದರೆ ಇಲ್ಲವೆಂದು ದೆಹಲಿ ಜಾಮಾ ಮಸೀದಿಯ ಶಾಹಿ ಇಮಾಂ ಅಬ್ದುಲ್ಲಾ ಬುಕಾರಿ ಪ್ರತಿಕ್ರಿಯಿಸಿದ್ದಾರೆ. ನೆರೆಯ ದೇಶಗಳಿಂದ ವಲಸೆ ಬರುವ ಮುಸ್ಲಿಮರಿಗಷ್ಟೇ ಸಮಸ್ಯೆ ಎದುರಾಗಲಿದೆ ಎಂದವರು ತಿಳಿಸಿದ್ದಾರೆ. ಪ್ರತಿಭಟನೆ ಪ್ರಜಾಪ್ರಭುತ್ವ ಹಕ್ಕಾಗಿದ್ದರೂ ಅದನ್ನು ಶಾಂತಿಯುತವಾಗಿ ಚಲಾಯಿಸಬೇಕೆಂದು ಅವರು ಚಳವಳಿಕಾರರಿಗೆ ಮನವಿ ಮಾಡಿದ್ದಾರೆ.

4